ಆ) ಈ ಕುರಿತಂತೆ ನಗರಸಭೆಗಳು ಅಭಿವೃದ್ಧಿ ಯೋಜನೆಗಳನ್ನು ಕಾರ್ಯಗತಗೊಳಿಸಲು ಹಾಗೂ ಅದಕ್ಕಾಗಿ ಅಭಿವೃದ್ಧಿ ಶುಲ್ಕ ವಿಧಿಸಿ ವಸೂಲಿ ಮಾಡಲು ಅನುಕೂಲವಾಗುವಂತೆ ಕರ್ನಾಟಕ ನಗರಾಭಿದ್ಧಿ ಪ್ರಾಧಿಕಾರಗಳ ಅಧಿನಿಯಮ 1997ಕ್ಕೆ ತಿದ್ದುಪಡಿ ಮಾಡುವ ಕುರಿತಂತೆ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ರಾಜ್ಯದಲ್ಲಿನ ನಗರಸಭೆ ಹಾಗೂ ಪುರಸಭೆಗಳಲ್ಲಿ ಸಲಹಾ ಸಮಿತಿ ನೇಮಕ ಮಾಡುವುದು.

780 (857) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) :ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಪುರಸಭೆ ಹಾಗೂ ನಗರಸಭೆಗಳಿಗೆ ಸಲಹಾ ಸಮಿತಿಗಳನ್ನು ನೇಮಕ ಮಾಡುವ ಅಗತ್ಯತೆಯನ್ನು ಸರ್ಕಾರ ಮನಗಂಡಿದೆಯೇ?

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರವು ಕೈಗೊಂಡ ಕ್ರಮಗಳೇನು?

ಶ್ರೀ ಮಲ್ಲಿಕಾರ್ಜುನ ನಾಗಪ್ಪ (ಪೌರಾಡಳಿತ ರಾಜ್ಯ ಸಚಿವರು) :

ಅ) ರಾಜ್ಯದಲ್ಲಿರುವ ಚುನಾಯಿತ ಸದಸ್ಯರ ಅಧಿಕಾರಾವಧಿ ಮುಕ್ತಾಯಗೊಂಡಿರುವ ಪುರ:ನಗರಸಭೆಗಳಿಗೆ ಸರ್ಕಾರ ಆಡಳಿತಾಧಿಕಾರಿಗಳನ್ನು ನೇಮಕ ಮಾಡಿದೆ. ಕರ್ನಾಟಕ ಪುರಸಭೆಗಳ ಅಧಿನಿಯ 1964ರ ಕಂಡಿಕೆ 315(3) ರನ್ವಯ ಸರ್ಕಾರ ಇಚ್ಚಿಸಿದಲ್ಲಿ, ಆಡತಿತಾಧಿಕಾರಿಗಳಿಗೆ ಸಲಹೆ ಮತ್ತು ಸಹಾಯ ನೀಡಲು ಸಲಹಾ ಸಮಿತಿ ನೇಮಕ ಮಾಡಲು ಅವಕಾಶವಿರುತ್ತದೆ. ಆದರೆ ಶೀಘ್ರದಲ್ಲಿ ಚುನಾವಣೆ ನಡೆಸಬೇಕಾಗುವ ಕಾರಣ ಸಲಹಾ ಸಮಿತಿ ನೇಮಿಸುವ ವಿಷಯ ಸದ್ಯದಲ್ಲಿ ಪರಿಶೀಲನೆಯಲ್ಲಿಲ್ಲ.

ಆ) ಉದ್ಭವಿಸುವುದಿಲ್ಲ

ಮಂಡ್ಯ ಜಿಲ್ಲೆಯಲ್ಲಿ ರೇಷ್ಮೆ ಕೃಷಿ ಪ್ರದೇಶದ ಅಭಿವೃದ್ಧಿ

781 (858) ಶ್ರೀ ಆತ್ಮಾನಂದ .ಎಂ.ಎಸ್ (ಮಂಡ್ಯ) : ಮಾನ್ಯ ರೇಷ್ಮೆ ಮತ್ತು ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆಯಲ್ಲಿ ರೇಷ್ಮೆ ಕೃಷಿ ಪ್ರದೇಶದ ವಿಸ್ತೀರ್ಣವೆಷ್ಟು; (ತಾಲ್ಲೂಕುವಾರು ಮಾಹಿತಿ ಒದಗಿಸುವುದು);

ಆ) ಮಂಡ್ಯ ಜಿಲ್ಲೆಯಲ್ಲಿ ವ್ಯಾಪಕವಾಗಿ ರೇಷ್ಮೆ ಕೃಷಿಯನ್ನು ಅಭಿವೃದ್ಧಿಗೊಳಿಸಲು ಸರ್ಕಾರವು ಯಾವುದಾದರೂ ಕ್ರಮ ಕೈಗೊಳ್ಳುವುದೇ?

ಶ್ರೀ ಎಂ. ಮಹದೇವ್ (ರೇಷ್ಮೆ ಮತ್ತು ಜವಳಿ ಸಚಿವರು) :

ಅ) ಮಂಡ್ಯ ಜಿಲ್ಲೆಯ ತಾಲ್ಲೂಕುವಾರು ಹಿಪ್ಪುನೇರಳೆ ವಿಸ್ತೀರ್ಣ ಕೆಳಕಂಡಂತಿದೆ.